ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 23/3/21

## ಎಲ್ಗರ್ ಪರಿಷತ್ ಗಲಭೆ ಪ್ರಕರಣ: ಸ್ವಾಮಿ ಜಾಮೀನು ಅರ್ಜಿ ತಿರಸ್ಕೃತ

**ಮುಂಬಯಿ:** ಎಲ್ಗರ್ ಪರಿಷತ್ - ನಕ್ಸಲ್ ಸಂಘಟನೆ ನಂಟು ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಆದಿವಾಸಿ ಹಕ್ಕುಗಳ ಹೋರಾಟಗಾರ ಸ್ಟ್ಯಾನ್ ಸ್ವಾಮಿ ಅವರ ಜಾಮೀನು ಅರ್ಜಿಯನ್ನು ವಿಶೇಷ ಎನ್‌ಐಎ ನ್ಯಾಯಾಲಯ ಸೋಮವಾರ ತಿರಸ್ಕರಿಸಿದೆ.



ಅನಾರೋಗ್ಯ ಸೇರಿದಂತೆ ಹಲವು ಕಾರಣಗಳ ಹಿನ್ನೆಲೆಯಲ್ಲಿ ಜಾಮೀನು ನೀಡಬೇಕೆಂದು 83 ವರ್ಷದ ಸ್ವಾಮಿ ಮನವಿ ಸಲ್ಲಿಸಿದ್ದರು. ಹೆಚ್ಚುವರಿ ಸೆಷನ್ಸ್ ಕೋರ್ಟಿನ ನ್ಯಾಯಾಧೀಶ ಡಿ ಇ ಕೊಥಾಲಿಕರ್ ಅವರು ಅರ್ಜಿಯ ವಿಚಾರಣೆ ನಡೆಸಿದರು. ''ಸ್ವಾಮಿ ಅವರು ಪಾರ್ಕಿನ್ಸನ್ಸ್ ಕಾಯಿಲೆಯಿಂದ ಬಳಲುತ್ತಿದ್ದು, ಅವರ ಎರಡೂ ಕಿವಿಗಳ ಶ್ರವಣ ಶಕ್ತಿ ಹಾಳಾಗಿದೆ. ಜತೆಗೆ ಅವರು ಹಲವು ಇತರ ಕಾಯಿಲೆಗಳಿಂದ ಬಳಲುತ್ತಿದ್ದಾರೆ,'' ಎಂದು ಅವರ ವಕೀಲರು ಕೋರ್ಟ್‌ಗೆ ಹೇಳಿದರು. ಅಲ್ಲದೆ, ಜಾಮೀನು ಮಂಜೂರು ಮಾಡಿದರೆ ಅದರ ಷರತ್ತುಗಳನ್ನು ತಮ್ಮ ಕಕ್ಷಿದಾರರು ಪಾಲಿಸಲಿದ್ದಾರೆ ಎಂದು ಆಶ್ವಾಸನೆ ನೀಡಿದರು.

''ಸ್ವಾಮಿ ಅವರು ನಿಷೇಧಿತ ಸಂಘಟನೆ ಜತೆ ನಂಟು ಹೊಂದಿರುವ ಹಿನ್ನೆಲೆಯಲ್ಲಿ ಅವರಿಗೆ ಜಾಮೀನು ನೀಡಬಾರದು,'' ಎಂದು ಸಿಬಿಐ ಪರ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ವಾದಿಸಿದರು.